# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 653
ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 21-02-2023
ಉತ್ತರಿಸುವ ಸಚಿವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಂಗನವಾಡಿ ಕೇಂದ್ರಗಳಿಗೆ ಅವಧಿ ಮೀರಿದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಂಗನವಾಡಿ ಕೇಂದ್ರಗಳಿಗೆ ಅವಧಿ ಮೀರಿದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುತ್ತಿರುವುದಿಲ್ಲ. |
| ಆ) | ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಪೌಷ್ಠಿಕ ಆಹಾರವನ್ನು ಪೂರೈಸಲು ಯಾವಾಗ ಟೆಂಡರ್‌ಗಳನ್ನು ಕರೆದು ಯಾವ ಯಾವ ಸಂಸ್ಥೆಗಳಿಗೆ ವಹಿಸಲಾಗಿದೆ; ಪೌಷ್ಠಿಕ ಆಹಾರವನ್ನು ಪೂರೈಕೆ ಮಾಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು; ಪೌಷ್ಠಿಕ ಆಹಾರವನ್ನು ಪೂರೈಸಲು ಕಪ್ಪು ಪಟ್ಟಿಗೆ ಸೇರಿರುವ ಕಂಪನಿಗೆ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಎಂ.ಎಸ್.ಪಿ.ಟಿ.ಸಿ. ಯವರ ಮೂಲಕ ಅಕ್ಕಿಯನ್ನು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ, ಸೂರ್ಯಕಾಂತಿ ಎಣ್ಣೆಯನ್ನು ಕರ್ನಾಟಕ ಎಣ್ಣೆ ಬೆಳೆಗಾರರ ಸಹಕಾರ ಸಂಘ (ಕೆ.ಓ.ಎಫ್) ನಿಂದ, ಕೆ.ಎಂ.ಎಫ್ ನಿಂದ ಹಾಲು ಖರೀದಿಸಿ ಹಾಗೂ ಇತರೆ ಸಾಮಗ್ರಿಗಳನ್ನು ಎಂ.ಎಸ್.ಪಿ.ಟಿ.ಸಿ. ಯವರಿಂದ ಅಂಗನವಾಡಿ ಕೇಂದ್ರಗಳಿಗೆ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡಲಾಗುತ್ತಿದೆ.<br><br>ರಿಟ್ ಅರ್ಜಿ ಸಂಖ್ಯೆ: 196/2001 ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿದ್ದ ಮಧ್ಯಂತರ ಆದೇಶದಂತೆ ರಾಜ್ಯ ಸರ್ಕಾರವು 22 ರಿಂದ 32 ಮಹಿಳೆಯರನ್ನೊಳಗೊಂಡ ಎಂ.ಎಸ್.ಪಿ.ಟಿ.ಸಿ. ಗಳನ್ನು ಸ್ಥಾಪಿಸಲು 2009 ರಲ್ಲಿ ಟೆಂಡರ್ ಕರೆದು ಬಲವರ್ಧಕರನ್ನು ಆಯ್ಕೆ ಮಾಡಲಾಗಿತ್ತು. ಇವರ ಮೂಲಕ 137 ಎಂ.ಎಸ್.ಪಿ.ಟಿ.ಸಿ. ಗಳನ್ನು ಸ್ಥಾಪಿಸಲಾಗಿರುತ್ತದೆ. ಈ ಎಂ.ಎಸ್.ಪಿ.ಟಿ.ಸಿ. ಗಳು ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದಡಿ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಅಂಗನವಾಡಿ ಫಲಾನುಭವಿಗಳಿಗೆ ಅಗತ್ಯವಿರುವ ಆಹಾರ ಪದಾರ್ಥಗಳನ್ನು ತಯಾರಿಸಿ ಸರಬರಾಜು ಮಾಡುತ್ತಿವೆ. ಕಪ್ಪುಪಟ್ಟಿಗೆ ಸೇರಿದ ಸಂಸ್ಥೆಗಳು ಆಹಾರ ಪದಾರ್ಥಗಳನ್ನು ಪೂರೈಸುತ್ತಿರುವುದಿಲ್ಲ. |
| ಇ. | ಆರ್ಥಿಕವಾಗಿ ಹಿಂದುಳಿದ ವರ್ಗದ ಮಕ್ಕಳು ಮತ್ತು ಗರ್ಭಿಣಿಯರಿಗೆ ಪೌಷ್ಠಿಕ ಆಹಾರಕ್ಕೆ ಬದಲು ಬಳಕೆಗೆ ಯೋಗ್ಯವಲ್ಲದ ಆಹಾರವನ್ನು ನೀಡಿ ಗರ್ಭಿಣಿಯರಿಗೆ ಮತ್ತು ಮಕ್ಕಳಿಗೆ ಆರೋಗ್ಯದಲ್ಲಿ ತೊಂದರೆಯಾದರೆ ಯಾರು ಈ ಜವಾಬ್ದಾರಿಯನ್ನು ಹೊರಬೇಕಾಗುತ್ತದೆ; | ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಈಗಾಗಲೇ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಿಗೆ ಒದಗಿಸುತ್ತಿರುವ ಆಹಾರ ಪದಾರ್ಥಗಳು ಉತ್ತಮ ಗುಣಮಟ್ಟದಿಂದ ಕೂಡಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ.<br><br>ಆದಾಗ್ಯೂ ಬಳಕೆಗೆ ಯೋಗ್ಯವಲ್ಲದ ಆಹಾರವನ್ನು ನೀಡಿ ಗರ್ಭಿಣಿಯರಿಗೆ ಮತ್ತು ಮಕ್ಕಳಿಗೆ ಆರೋಗ್ಯದಲ್ಲಿ ತೊಂದರೆಯಾದರೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮತ್ತು ಜಿಲ್ಲಾ ಉಪ ನಿರ್ದೇಶಕರುಗಳು ನೇರ ಹೊಣೆಗಾರರಾಗಿರುತ್ತಾರೆ. |

| | | |
|---|---|---|
| ಈ. | ಅವಧಿ ಮೀರಿದ ಪೌಷ್ಟಿಕ ಆಹಾರವನ್ನು ಪೂರೈಸಿದ ಸಂಸ್ಥೆಯ ವಿರುದ್ಧ ಸರ್ಕಾರದ ಕ್ರಮವೇನು; ಈ ಅಕ್ರಮಗಳಿಗೆ ಸಹಕರಿಸಿದ ಇಲಾಖಾ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಳ್ಳುವ ಕ್ರಮವೇನು? | ಮೇಲಿನ (ಅ)ಗೆ ನೀಡಿದ ಉತ್ತರದಿಂದ ಅನ್ವಯಿಸುವುದಿಲ್ಲ. |

**ಸಂಖ್ಯೆ:ಮಮಇ 36 ಐಸಿಡಿ 2023**

Halappa BA

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.